

ಅರುಣ ಪಿ. ಭಟ್ಟ


## ವಾರಭವಿಷ್ಯ: 19.06.2025ರಿಂದ 25.06.2025ರವರೆಗೆ




ಬೌದ್ಧಿಕ ಶಕ್ತಿಯಿಂದ ಗೌರವಕ್ಕೆ ಪಾತ್ರರಾಗುತ್ತೀರಿ. ಸ್ಪರ್ಧೆ, ಕ್ರೀಡಾ ಕ್ಷೇತ್ರಗಳಲ್ಲಿ ಉತ್ತಮ ಸ್ಥಾನ ಪಡೆಯಲಿದ್ದೀರಿ. ಹಣಕಾಸು ವಿಚಾರದಲ್ಲಿ ಪ್ರಗತಿ ಇದೆ. ಸಾಲ ಮರುಪಾವತಿಗೆ ಸಮಸ್ಯೆಗಳು ಎದುರಾಗಬಹುದು. ಪ್ರತಿಸ್ಪರ್ಧಿಗಳು ನಿಮ್ಮನ್ನು ಮಣಿಸಲು ಬಹಳ ಶ್ರಮಿಸುತ್ತಾರೆ. ವಾರದ ಅಂತ್ಯಕ್ಕೆ ಸರಿಯುತ್ತಾ ಉದ್ಯೋಗ ವ್ಯವಹಾರದಲ್ಲಿ ಉನ್ನತ ಸ್ಥಾನ ಪಡೆದುಕೊಳ್ಳುವ ಯೋಗ ಇದೆ. ಶುಭದಿನ: 20. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.




ಜೀವನ ಗುಣಮಟ್ಟ ಮೇಲಕ್ಕೆ ಏರಲಿದೆ. ದೈಹಿಕ ಕ್ಷಮತೆ ಹೆಚ್ಚಾಗಲಿದೆ. ದೈನಂದಿನ ಚಟುವಟಿಕೆಗಳನ್ನು ಇನ್ನಷ್ಟು ಉತ್ಸಾಹದಿಂದ ಮಾಡಲಿದ್ದೀರಿ. ಪ್ರೀತಿಪಾತ್ರರ ನಡುವಿನ ಬಾಂಧವ್ಯ ಗಟ್ಟಿಯಾಗಲಿದೆ. ತುಂಬ ಸಂತೋಷದಿಂದ ಸಮಯ ಕಳೆಯಲಿದ್ದೀರಿ. ಆರೋಗ್ಯ ಉತ್ತಮ ಸ್ಥಿತಿಯಲ್ಲಿ ಇರುತ್ತದೆ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ಶುಭದಿನ: 24. ಸೌಂದರ್ಯ ಲಹರಿ ಪಠಿಸಿರಿ.





ವ್ಯಾಪಾರದಲ್ಲಿ ನಿಮ್ಮ ಹಿಡಿತ ಗಟ್ಟಿಯಾಗಲಿದೆ. ಆತ್ಮವಿಶ್ವಾಸ ಹೆಚ್ಚಾಗಲಿದೆ. ಭಿನ್ನಾಭಿಪ್ರಾಯಗಳು ಇದ್ದಲ್ಲಿ ಬಗೆಹರಿಯಲಿವೆ. ಈ ವಾರ ನಿಮ್ಮ ಪಾಲಿಗೆ ಅದೃಷ್ಟ ಕೈ ಹಿಡಿಯಲಿದೆ. ಉದ್ಯೋಗದಲ್ಲಿ ನಿಮ್ಮ ಸ್ಥಿತಿ ಉತ್ತಮವಾಗಿರುತ್ತದೆ. ಪೋಷಕರ ಸಂತೋಷಕ್ಕಾಗಿ ಅವರ ಅಗತ್ಯಗಳನ್ನು ಪೂರೈಸಲಿದ್ದೀರಿ. ವೈವಾಹಿಕ ಜೀವನದ ಸಂತೋಷಕ್ಕಾಗಿ ಪ್ರಯತ್ನಿಸಲಿದ್ದೀರಿ. ಶುಭದಿನ: 22. ಲಕ್ಷ್ಮೀನರಸಿಂಹ ಜಪ ಮಾಡಿರಿ.





ಆಸ್ತಿ ವ್ಯವಹಾರಗಳಲ್ಲಿ ಪ್ರಗತಿ. ಕಿರು ಪ್ರಯಾಣ ಕೈಗೊಳ್ಳುವ ಯೋಗವಿದೆ. ನಿಮ್ಮ ಧೈರ್ಯ ಹೆಚ್ಚಾಗಲಿದೆ. ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳಲ್ಲಿ ಆಸಕ್ತಿ ಹೆಚ್ಚಾಗಲಿದೆ. ಕನಸಿನ ಗುರಿ ಮುಟ್ಟಲು ಸೂಕ್ತ ಅವಕಾಶ ದೊರೆಯಲಿದೆ. ಆರೋಗ್ಯ ಸಮಸ್ಯೆಗಳು ಕಾಡಬಹುದು. ಉದ್ಯೋಗ ಸ್ಥಳದಲ್ಲಿ ಒತ್ತಡ ಹೆಚ್ಚಾಗಬಹುದು. ಶುಭದಿನ: 21. ವಿಷ್ಣು ಸಹಸ್ರನಾಮ ಪಠಿಸಿರಿ.




ಉದ್ಯೋಗದಲ್ಲಿ ಯಶಸ್ಸು ಪಡೆಯಲಿದ್ದೀರಿ. ನೀವು ಅನುಭವಿಸಿದ ನಷ್ಟವನ್ನು ಮತ್ತೆ ಭರಿಸಲು ಪ್ರಯತ್ನವನ್ನು ಮಾಡಲಿದ್ದೀರಿ. ಕುಟುಂಬದ ಜೊತೆ ಉತ್ತಮ ಸಮಯ ಕಳೆಯಲಿದ್ದೀರಿ. ಸಮಾಜದಲ್ಲಿ ಉತ್ತಮ ಹೆಸರು ಪಡೆಯಲಿದ್ದೀರಿ. ವಾರಾಂತ್ಯಕ್ಕೆ ಸರಿಯುತ್ತಾ ನೀವು ಅಂದುಕೊಂಡಿದ್ದಕ್ಕಿಂತ ಸಕಾರಾತ್ಮಕ ಹಾಗೂ ಆಶಾದಾಯಕವಾದ ಫಲಿತಾಂಶಗಳು ದೊರೆಯಲಿವೆ. ಶುಭದಿನ: 21. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.





ಪೋಷಕರ ಜೊತೆ ಬಾಂಧವ್ಯ ಗಟ್ಟಿಯಾಗಲಿದೆ. ಬಹಳ ಸಮಯದಿಂದ ಎದುರು ನೋಡುತ್ತಿದ್ದ ಆಸ್ತಿ ವ್ಯವಹಾರದಲ್ಲಿ ಪ್ರಗತಿ ಕಾಣಲಿದೆ. ಸ್ಥಿರವಾದ ಆರೋಗ್ಯ ಕಾಪಾಡಿಕೊಳ್ಳುವುದು ಸವಾಲಾಗಿ ಪರಿಣಮಿಸಲಿದೆ. ಕಾನೂನು ವ್ಯಾಜ್ಯಗಳು ನಡೆಯುತ್ತಿದ್ದಲ್ಲಿ ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ನಿಮ್ಮಲ್ಲಿ ಧೈರ್ಯ ಹೆಚ್ಚಾಗಲಿದೆ. ಕುಟುಂಬದಲ್ಲಿ ಸಾಮರಸ್ಯ ಇರಲಿದೆ. ಶುಭದಿನ: 24. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.





ಲಾಭ ಗಳಿಸುವ ಯೋಗ ಇದೆ. ಬೌದ್ಧಿಕ ಸಾಮರ್ಥ್ಯ ವೃದ್ಧಿ ಆಗಲಿದೆ. ಸಹೋದ್ಯೋಗಿಗಳ ಜೊತೆ ಉತ್ತಮ ಬಾಂಧವ್ಯ ಇರಲಿದೆ. ಸಂತಾನ ಅಪೇಕ್ಷಿತರಿಗೆ ಶುಭ ಸುದ್ದಿ ಕೇಳುವ ಯೋಗ ಇದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಪ್ರಗತಿ ಕಾಣಲಿದ್ದೀರಿ. ಖರ್ಚಿನ ಪ್ರಮಾಣ ಹೆಚ್ಚಾಗಲಿದೆ. ನಿಮ್ಮ ವರ್ಚಸ್ಸಿಗೆ ಧಕ್ಕೆ ತರುವುದಕ್ಕೆ ವಿರೋಧಿಗಳು ಪ್ರಯತ್ನ ಪಡಬಹುದು. ಶುಭದಿನ: 23. ಚಂಡಿ ಪಾರಾಯಣ ಮಾಡಿರಿ.





ಸಹೋದ್ಯೋಗಿಗಳ ಬೆಂಬಲ ನಿಮಗೆ ದೊರೆಯಲಿದೆ. ದೈಹಿಕ ಕ್ಷಮತೆ ಉತ್ತಮವಾಗಿರುತ್ತದೆ. ಈ ಹಿಂದಿನ ಆರೋಗ್ಯ ಸಮಸ್ಯೆಗಳು ಇದ್ದಲ್ಲಿ ನಿವಾರಣೆ ಆಗುತ್ತವೆ. ವ್ಯಾಪಾರಿಗಳಿಗೆ ಲಾಭದ ಪ್ರಮಾಣ ಹೆಚ್ಚಾಗಲಿದೆ. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ವಿಚಾರದಲ್ಲಿ ಪ್ರಗತಿ ಇದೆ. ಗುರಿ ಮುಟ್ಟಲು ಆಲಸ್ಯವನ್ನು ಬಿಡಬೇಕಾಗುತ್ತದೆ. ವೃತ್ತಿ ಕಾರಣಕ್ಕಾಗಿ ಪ್ರಯಾಣ ಮಾಡಬೇಕಾಗುತ್ತದೆ. ಶುಭದಿನ: 25. ದತ್ತಗುರು ಚರಿತ್ರೆ ಪಠಿಸಿರಿ.





ಅದೃಷ್ಟ ನಿಮ್ಮ ಪಾಲಿಗೆ ಇರಲಿದೆ. ರಾಜಕೀಯವಾಗಿ ಪ್ರಗತಿ ಇದೆ. ಸರ್ಕಾರಿ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಏಳ್ಗೆ ಇದೆ. ಆರೋಗ್ಯ ಉತ್ತಮವಾಗಿರುತ್ತದೆ. ಅನುಭವಿಗಳ ಮಾರ್ಗದರ್ಶನದಿಂದ ಹೊಸ ಕೌಶಲ ಕಲಿಯಲು ಸಾಧ್ಯವಾಗುತ್ತದೆ. ಉದ್ಯೋಗ ಕಾಯಂ ಆಗುವ ಯೋಗ ಇದೆ. ಸಣ್ಣ ಪುಟ್ಟ ಆರೋಗ್ಯ ಸಮಸ್ಯೆಗಳು ಕಾಡಬಹುದು. ಶುಭದಿನ: 22. ಲಲಿತಾ ಸಹಸ್ರನಾಮ ಪಠಿಸಿರಿ.




ಹೂಡಿಕೆ ವಿದೇಶ ವ್ಯವಹಾರಗಳು ಲಾಭದಾಯಕವಾಗಲಿವೆ. ಕಾನೂನು ವ್ಯವಹಾರಗಳಲ್ಲಿ ನಿಮ್ಮ ಕೈ ಮೇಲಾಗಲಿದೆ. ಪ್ರತಿಸ್ಪರ್ಧಿಗಳು ನಿಮಗೆ ಸವಾಲೊಡ್ಡಬಹುದು. ನಿಮ್ಮ ಶ್ರಮಕ್ಕೆ ಈಗ ಮಾನ್ಯತೆ ದೊರೆಯಲಿದೆ. ವೃತ್ತಿಜೀವನದಲ್ಲಿ ಸಕಾರಾತ್ಮಕವಾದ ಬೆಳವಣಿಗೆ ಕಾಣಲಿದ್ದೀರಿ. ಪ್ರೀತಿ ಪ್ರೇಮದಲ್ಲಿ ಇರುವವರಿಗೆ ಸುಮಧುರ ಕ್ಷಣಗಳನ್ನು ಕಳೆಯುವ ಯೋಗ ಇದೆ. ಶುಭದಿನ: 24. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಸಮಾಜದ ಪ್ರಮುಖರು ನಿಮ್ಮ ಕಠಿಣ ಪರಿಶ್ರಮವನ್ನು ಗುರುತಿಸಲಿದ್ದಾರೆ. ಮುಖ್ಯ ಹುದ್ದೆಯಲ್ಲಿ ಇರುವವರಿಗೆ ಹಿಡಿತ ಗಟ್ಟಿ ಮಾಡಿಕೊಳ್ಳಲು ಅವಕಾಶ ದೊರೆಯಲಿದೆ. ಆರೋಗ್ಯದಲ್ಲಿ ಏರಿಳಿತ ಇರಲಿದೆ. ವಾರಾಂತ್ಯಕ್ಕೆ ಸಾಮಾಜಿಕ ಜೀವನದಲ್ಲಿ ಸಕಾರಾತ್ಮಕ ಬೆಳವಣಿಗೆ ಕಾಣಲಿದ್ದೀರಿ. ನಾನಾ ಮೂಲಗಳಿಂದ ಒಳಿತನ್ನು ಅನುಭವಿಸಲಿದ್ದೀರಿ. ಶುಭದಿನ: 20. ಲಕ್ಷ್ಮಿ ಕನಕಧಾರಾ ಸ್ತೋತ್ರ ಪಠಿಸಿರಿ.




ಸೋದರ ಸಂಬಂಧಿಗಳ ಜೊತೆ ಬಾಂಧವ್ಯ ಗಟ್ಟಿಯಾಗಲಿದೆ. ಕೆಲಸದ ಸಂಬಂಧ ಪ್ರಯಾಣ ಮಾಡಬೇಕಾಗುತ್ತದೆ. ಪ್ರತಿಸ್ಪರ್ಧಿಗಳು ನಿಮ್ಮ ಪ್ರಗತಿಗೆ ಅಡ್ಡಗಾಲು ಹಾಕುತ್ತಾರೆ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಕಾನೂನು ವ್ಯಾಜ್ಯಗಳು ನಡೆಯುತ್ತಿದ್ದಲ್ಲಿ ಅಗತ್ಯ ದಾಖಲೆ ಪತ್ರಗಳನ್ನು ಜೋಪಾನವಾಗಿ ಇಟ್ಟುಕೊಳ್ಳಿ. ಶುಭ ಫಲಗಳು ಕಂಡುಬರುತ್ತವೆ. ಶುಭದಿನ: 22. ಶಿವಕವಚ ಪಠಿಸಿರಿ.